KARNATAKA SUCCESS NO 1
Kannada Daily
ಸಂಪಾದಕರು/ಮಾಲೀಕರು
ರಾಧಿಕಾ ಎ.ಆರ್.
Volume: 02 Issue-170
ಭಾನುವಾರ 11 ಮೇ 2025
Price: 2.00 Rs. Pages - 2

RNI: KARKAN/2023/88508

# ಕರ್ನಾಟಕ ಸಕ್ಸಸ್ ನಂ 1

ಕನ್ನಡ ದಿನಪತ್ರಿಕೆ

ನಮ್ಮ ಸಂಪರ್ಕ: ಇ–ಮೇಲ್: karnatakasuccessno1ar@gmail.com ಮೊಬೈಲ್: 9380988530, 9606988508



ಶಿರಾ ತಲ್ಲೂಕು ದೊಡ್ಡಬಾಣಗೆರೆ ಗ್ರಾಮದ ದೇವತಾ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಗೃಹ ಸಚಿವರ ವಿಶೇಷ ಕರ್ತವ್ಯಾಧಿಕಾರಿ ಡಾ.ಕೆ.ನಾಗಣ್ಣ ಅವರಿಗೆ ಗ್ರಾಮಸ್ಥರು ಸನ್ಮಾನಿಸಿ ಅಭಿನಂದಿಸಿದರು.

### ಹೇಮರೆಡ್ಡಿ ಮಲ್ಲಮ್ಮ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ತಹಶೀಲ್ದಾರ್ ರಾಜೇಶ್ವರಿ

## ಪ್ರತಿ ಕುಟುಂಬಕ್ಕೂ ಮಹಾಸಾಧ್ವಿ ಹೇಮರೆಡ್ಡಿ ಮಲ್ಲಮ್ಮ ಆದರ್ಶ

ತುಮಕೂರು: ಗೃಹಿಣಿಯಾಗಿಯೇ, ತನ್ನ ಕುಟುಂಬವನ್ನು ತಿದ್ದಿ, ತೀಡಿ, ಸಮಾಜದಲ್ಲಿ ಆದರ್ಶ ವ್ಯಕ್ತಿಗಳನ್ನಾಗಿ ರೂಪಿಸುವ ಮೂಲಕ ಮಹಾಸಾಧ್ವಿ ಹೇಮರೆಡ್ಡಿ ಮಲ್ಲಮ್ಮ, ಭಾರತೀಯ ಗೃಹಿಣಿಯರಿಗೆ ಮಾದರಿಯಾಗಿದ್ದಾರೆ ಎಂದು ತುಮಕೂರು ತಹಶೀಲ್ದಾರ್ ರಾಜೇಶ್ವರಿ ಅಭಿಪ್ರಾಯಪಟ್ಟಿದ್ದಾರೆ.

ನಗರದ ಡಾ.ಗುಬ್ಬಿ ವೀರಣ್ಣ ಕಲಾಕ್ಷೇತ್ರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ,ಮಹಾನಗರಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಸಾಹಿತ್ಯ ಪರಿಷತ್ ಹಾಗೂ ಜಿಲ್ಲಾ ರೆಡ್ಡಿ ಜನಸಂಘ(ರಿ), ವತಿಯಿಂದ ಆಯೋಜಿಸಿದ್ದ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡುತಿದ್ದ ಅವರು,ಹೇಮರೆಡ್ಡಿ ಮಲ್ಲಮ್ಮ, ವಿಜ್ಞಾನಿಯಾಗಿರಲಿಲ್ಲ, ವೈದ್ಯರಾಗಿರಲಿಲ್ಲ. ರಾಣಿಯಾಗಿರಲಿಲ್ಲ. ಶಿಕ್ಷಕರು ಅಲ್ಲ, ಆದರು ಅವರನ್ನು ನಾವು ಇಂದು ಪೂಜ್ಯನೀಯ ಭಾವನೆಯಿಂದ ನೋಡುತ್ತಿದ್ದೇವೆ ಎಂದರೆ, ಅವರು ಸಂಸಾರಿಕ ಜೀವನದಲ್ಲಿ



ಇದ್ದುಕೊಂಡೇ ಸಂತರ ರೀತಿ ಬದುಕಿದವರು.ಪಾಮರನಾಗಿದ್ದ ಪತಿಯನ್ನು ಪಂಡಿತನಾಗಿಸಿದ್ದಲ್ಲದೆ,ಲೋಪಪನಾಗಿದ್ದ ಮೈದುನ ವೇಮನನ್ನು ತಪಸ್ವಿಯಾಗಿಸಿದ್ದು ಈಕೆಯ ದೊಡ್ಡ ಸಾಧನೆ ಎಂದರು.

ಕಸಾಪ ಜಿಲ್ಲಾಧ್ಯಕ್ಷರಾದ ಕೆ.ಎಸ್.ಸಿದ್ದಲಿಂಗಪ್ಪ ಮಾತನಾಡಿ,ಅವಿಭಕ್ತ ಕುಟುಂಬದ ಓರ್ವ ಸೊಸೆಯಾಗಿ,ತನಗಾದ ಎಲ್ಲ ಅವಮಾನ, ಅಪಮಾನಗಳನ್ನು ಸಹಿಸಿಕೊಂಡು, ಸಮಾಜದ ಎದುರು ಕುಟುಂಬದ ಘನತೆಯನ್ನು ಎತ್ತಿ ಹಿಡಿದ ಕೀರ್ತಿ ಹೇಮರೆಡ್ಡಿ ಮಲ್ಲಮ್ಮ ಅವರಿಗೆ ಸಲ್ಲುತ್ತದೆ ಎಂದರು.

ಜಿಲ್ಲಾ ರೆಡ್ಡಿ ಜನಸಂಘ ಹಾಗೂ ರೆಡ್ಡಿ ಕ್ರೆಡಿಟ್ ಕೋ ಅಪರೇಟಿವ್ ಸೋಸೈಟಿಯ ಅಧ್ಯಕ್ಷ ಕೆ.ಶ್ರೀನಿವಾಸರೆಡ್ಡಿ ಮಾತನಾಡಿ,ರೆಡ್ಡಿ ಜನಸಮುದಾಯಕ್ಕೆ ವೇಮನ ಮತ್ತು ಹೇಮರೆಡ್ಡಿ ಮಲ್ಲಮ್ಮ ಇಬ್ಬರು ಸಾಂಸ್ಕೃತಿಕ ನಾಯಕರು. ಇವರ ಜಯಂತಿಯನ್ನು ಪ್ರತಿಯೊಬ್ಬ ರೆಡ್ಡಿ ಜನಾಂಗದ ಮನೆಯಲ್ಲಿಯೂ ಹಬ್ಬದ ರೀತಿ ಆಚರಿಸಬೇಕಾಗಿದೆ.ಇಡೀ ಸಮುದಾಯದ ಜನರು ತಮ್ಮ ಕುಟುಂಬ ಸಮೇತರಾಗಿ ಇಂತಹ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ಮೂಲಕ ತಮ್ಮ ಒಗ್ಗಟ್ಟು ಪ್ರದರ್ಶಿಸಬೇಕು.ರೆಡ್ಡಿ ಜನಸಂಘ ಸಮುದಾಯದ ಮಕ್ಕಳ ಶೈಕ್ಷಣಿಕ ಏಳಿಗೆಗಾಗಿ ಸುಮಾರು 3 ಎಕರೆ ಜಮೀನು ಖರೀದಿಸಿದ, ಬಾಲಕ, ಬಾಲಕಿಯರ ಹಾಸ್ಟಲ್ ನಿರ್ಮಾಣ ಮಾಡಲಾಗುತ್ತಿದೆ. ಎಲ್ಲವೂ ಕೊನೆಗೊಳ್ಳುವ ಹಂತಲ್ಲಿದ್ದು, ಸಮುದಾಯ ಅರ್ಥಿಕ ಸಹಾಯ ಮಾಡಬೇಕು. ಗ್ರಾಮೀಣ ಭಾಗದ ಬಡ್ಡಿ ರೆಡ್ಡಿ ಕುಟುಂಬಗಳ ಮಕ್ಕಳ ಓದಿಗೆ ಇದು ಅನುಕೂಲವಾಗಲಿದೆ ಎಂದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿದ್ದ ಹಿರೇಮಠದ ಶ್ರೀಶ್ರೀಶಿವಾನಂದ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ,ವೇಮನ, ಹೇಮರೆಡ್ಡಿ ಮಲ್ಲಮ್ಮ, ಬಸವಣ್ಣ ಇಂತಹ ದಾರ್ಶಾನಿಕರನ್ನು ಒಂದು ಜಾತಿಗೆ ಸಿಮೀತವಾಗಿಸುವುದು ಸರಿಯುಲ್ಲ. ವೇದಿಕೆಯುಲ್ಲಿ ಅವರ ತತ್ವ ಸಿದ್ಧಾಂತಗಳನ್ನು ಹಾಡಿ ಹೊಗಳುವ ಜನರು, ಕಾರ್ಯುಕ್ರಮುವನ್ನು ಮಾತ್ರ ಒಂದು ಸಮುದಾಯಕ್ಕೆ ಸಿಮೀತಗೊಳಿಸುವುದು ಸರಿಯಲ್ಲ.ಜಗಜ್ಯೋತಿ ಬಸವಣ್ಣನವರನ್ನು ಒಂದು ಜಾತಿಗೆ ಮಾತ್ರ ಎಂಬಂತೆ ಬಿಂಬಿಸಿರುವುದು ದುರಂತ.ಇದು ಬದಲಾಗಬೇಕು ಎಂದರು.

ಜಿಲ್ಲಾ ರೆಡ್ಡಿ ಜನಸಂಘದಿಂದ ನಿರ್ಮಿಸುತ್ತಿರುವ ಹಾಸ್ಟಲ್ ಕಟ್ಟಡದ ನೆರವಿಗಾಗಿ ಸಂಘದ ನಿರ್ದೇಶಕ ಎನ್.ನರಸಿಂಹರೆಡ್ಡಿ ಎರಡು ಲಕ್ಷ ರೂಗಳ ಚೆಕ್ ನೀಡಿದರು.ಜಿಲ್ಲಾ ರೆಡ್ಡಿ ಜನಸಂಘದ ಜಂಟಿ ಕಾರ್ಯದರ್ಶಿ ಕೆ.ಜೆ.ರಾಜಗೋಪಾಲರೆಡ್ಡಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಪ್ರೊ.ಅಶ್ವಥ್ ವಿಶೇಷ ಉಪನ್ಯಾಸ ನೀಡಿದರು.ವೇದಿಕೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ಸುರೇಶಕುಮಾರ್,ಜಿಲ್ಲಾ ರೆಡ್ಡಿ ಜನಸಂಘದ ಕಾರ್ಯದರ್ಶಿ ಬಿ.ಆರ್.ಮಧು,ಖಜಾಂಚಿ ಶಿವಾರೆಡ್ಡಿ, ನಿರ್ದೇಶಕರಾದ ಎಸ್,ಕೆ.ಮಲ್ಲಿಕಾರ್ಜುನ ರೆಡ್ಡಿ, ಎನ್.ನರಸಿಂಹರೆಡ್ಡಿ, ಶ್ರೀಮತಿ.ಕೆ.ನಿರ್ಮಲ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಭಾರತೀಯ ಸೇನೆಗೆ ಶಕ್ತಿ ತುಂಬಲು ವಿಶೇಷ ಪೂಜೆ



ತುಮಕೂರು ಪೆಹಲ್ಗಾಮ್ ನಲ್ಲಿ ಪ್ರವಾಸಿಗರ ಮೇಲೆ ನಡೆದ ಉಗ್ರರ ದಾಳಿಯಲ್ಲಿ ಮೃತರಾದ ಜನರ ಆತ್ಮಕ್ಕೆ ಶಾಂತಿ ಕೋರಿ ಹಾಗೆಯೇ ಉಗ್ರರ ವಿರುದ್ಧ ದಾಳಿಗೆ ಮುಂದಾಗಿರುವ ಭಾರತೀಯ ಸೇನೆ ವಿಜಯ ಸಾಧಿಸಲಿ ಎಂದು ನಗರದ ಮಂಡಿಪೇಟೆಯ ಆಯಿಲ್ ಮಿಲ್ ರಸ್ತೆಯಲ್ಲಿರುವ ಶ್ರೀ ರಾಜರಾಜೇಶ್ವರಿ ಗಂಗಾಭವಾನಿ ಅಮ್ಮನವರಿಗೆ ಭಕ್ತರು ವಿಶೇಷವಾಗಿ ಪೂಜೆ ಸಲ್ಲಿಸಿದರು.

### ಬಾಲ ಮಂದಿರದಲ್ಲಿ ನಡೆದ ಅಧಿಕಾರಿಗಳ ಸಮಸ್ವಯ ಸಭೆಯಲ್ಲಿ ಡಾ.ತಿಪ್ಪೇಸ್ವಾಮಿ ಕೆ.ಟಿ.

## ಸಂಕಷ್ಟದಲ್ಲಿರುವ ಮಕ್ಕಳ ರಕ್ಷಣೆ ಪುನರ್ವಸತಿ ನಮ್ಮೆಲ್ಲರ ಹೊಣೆ

ತುಮಕೂರು: ಸಂಕಷ್ಟದಲ್ಲಿನ ಮಕ್ಕಳನ್ನು ರಕ್ಷಿಸಿ ಅವರಿಗೆ ಸೂಕ್ತ ಪುನರ್ವಸತಿ ಕಲ್ಪಿಸಿ ಮುಖ್ಯವಾಹಿನಿಗೆ ಸೇರಿಸುವಲ್ಲಿ ಮಕ್ಕಳ ರಕ್ಷಣಾ ವ್ಯವಸ್ಥೆಯಲ್ಲಿರುವ ಎಲ್ಲಾ ಭಾಗೀದಾರರು ಸಮನ್ವಯದಿಂದ ಕೆಲಸ ಮಾಡುವ ಅಗತ್ಯವಿದೆ ಎಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಡಾ.ತಿಪ್ಪೇಸ್ವಾಮಿ ಕೆ.ಟಿ. ತಿಳಿಸಿದರು.

ಅವರು ತುಮಕೂರಿನ ಬಾಲ ಮಂದಿರದಲ್ಲಿ ನಡೆದ ಮಕ್ಕಳ ಕಲ್ಯಾಣ ಸಮಿತಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಮಕ್ಕಳ ಸಹಾಯವಾಣಿ ಹಾಗೂ ಬಾಲಮಂದಿರಗಳ ಸಿಬ್ಬಂಧಿಗಳು ಹಾಗೂ ಅಧಿಕಾರಿಗಳ ಸಮನ್ವಯ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ರಾಜ್ಯದಲ್ಲಿ ದೊಡ್ಡ ಜಿಲ್ಲೆಗಳಲ್ಲಿ ಒಂದಾದ ತುಮಕೂರು ಜಿಲ್ಲೆಯಲ್ಲಿ ಮಕ್ಕಳ ಮೇಲಿನ ದೌರ್ಜನ್ಯ ಪ್ರಕರಣಗಳು, ಅಪ್ರಾಪ್ತ ಹೆಣ್ಣು ಮಕ್ಕಳ ಗರ್ಭಧಾರಣೆ ಪ್ರಕರಣಗಳು, ಮಕ್ಕಳ ಅಪೌಷ್ಟಿಕತೆ, ಇತ್ಯಾದಿ ಸವಾಲುಗಳು



ಮಕ್ಕಳನ್ನು ಕಾಡುತ್ತಿದ್ದು ಇದಕ್ಕೆ ಪರಿಣಾಮಕಾರಿ ಕಾರ್ಯಾಚರಣೆ ಮಾಡಲು ಹಾಗೂ ಸಂತ್ರಸ್ಥ ಮಕ್ಕಳಿಗೆ ಸಕಾಲಿಕ ನ್ಯಾಯದಾನ ಹಾಗೂ ಪುನರ್ವಸತಿ ಕಲ್ಪಿಸಲು ಎಲ್ಲರ ಸಂಘಟಿತ ಪ್ರಯತ್ನ ಅತ್ಯಾವಶ್ಯಕ. ಈ ನಿಟ್ಟಿನಲ್ಲಿ ಅಧಿಕಾರಿಗಳು ಹಾಗೂ ಸಿಬ್ಬಂಧಿಗಳು ಪರಸ್ಪರ ಸಹಕಾರ ಮತ್ತು ಬದ್ದತೆಯಿಂದ ಕೆಲಸ ಮಾಡಬೇಕಿದೆ ಎಂದರು. ಇದಕ್ಕಾಗಿ ಪ್ರತೀ ಮೂರು ತಿಂಗಳಿಗೊಮ್ಮೆ ಸಮನ್ವಯ ಸಭೆ ನಡೆಸಿ ಪ್ರಗತಿ ಪರಿಶೀಲನೆಗೆ ಕ್ರಮವಹಿಸುವಂತೆ ಜಿಲ್ಲಾ ಮಕ್ಕಳ ರಕ್ಷಣಾ ಘಟಕಕ್ಕೆ ಸೂಚಿಸಿದರು.

ಸಭೆಯಲ್ಲಿ ಹಾಜರಿದ್ದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಶ್ರೀ ಚೇತನ್ ಕುಮಾರ್ ಮಾತನಾಡಿ ಜಿಲ್ಲೆಯಲ್ಲಿ ಮಕ್ಕಳ ಹಕ್ಕುಗಳನ್ನು ರಕ್ಷಿಸಲು ಯೋಜಿತ ಕಾರ್ಯಚಟುವಟಿಕೆಗಳು ಹಾಗೂ ವ್ಯಾಪಕ ಅರಿವು ಕಾರ್ಯಾಗಾರಗಳು ಅತ್ಯಗತ್ಯ. ಮಕ್ಕಳಲ್ಲಿ ಮೊಬೈಲ್ ಬಳಕೆ ಹೆಚ್ಚುತ್ತಿದ್ದು ಇದು ಮಕ್ಕಳ ಆರೋಗ್ಯದ ಮೇಲಷ್ಟೇ ಅಲ್ಲದೇ ದೌರ್ಜನ್ಯಕ್ಕೂ ಕಾರಣವಾಗುತ್ತಿದೆ. ಇದನ್ನು ತಡೆಯುವ ನಿಟ್ಟಿನಲ್ಲಿ ಮಕ್ಕಳ ರಕ್ಷಣಾ ಘಟಕ ಮತ್ತಷ್ಟು ಚುರುಕಾಗಿ ಕೆಲಸ ಮಾಡಬೇಕೆಂದರು.

ನೂತನವಾಗಿ ಮಕ್ಕಳ ಕಲ್ಯಾಣ ಸಮಿತಿಯ ಸದಸ್ಯರಾಗಿ ನೇಮಕವಾದ ಶ್ರೀಮತಿ ಸೌಮ್ಯ, ಶ್ರೀಮತಿ ಆಶಾ ಹಾಗೂ ಡಾ.ಟವಿಕುಮಾರ್ ರವರನ್ನು ಸ್ವಾಗತಿಸಿದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಶ್ರೀ ದಿನೇಶ್ ರವರು ಎಲ್ಲರೂ ಜೊತೆಗೂಡಿ ತುಮಕೂರು ಜಿಲ್ಲೆಯಲ್ಲಿ ಮಕ್ಕಳ ರಕ್ಷಣಾ ವ್ಯವಸ್ಥೆಯನ್ನು ಬಲಪಡಿಸೋಣ ಎಂದರು.

ಸದರಿ ಸಭೆಯಲ್ಲಿ ರಕ್ಷಣಾಧಿಕಾರಿಗಳಾದ ಶ್ರೀ ಶಿವಣ್ಣ, ಶ್ರೀ ಗೌತಮ್ ಹಾಗೂ ಮಕ್ಕಳ ಸಹಾಯವಾಣಿ ಸಂಯೋಜಕಿ ಅನುಷಾ ಹಾಗೂ ಇನ್ನಿತರೆ ಅಧಿಕಾರಿ ಸಿಬ್ಬಂದಿಗಳು ಹಾಜರಿದ್ದರು.

## ತನು ಕೆ.ಎಂ.ಗೆ ಡಾ.ಕೆ.ನಾಗಣ್ಣ ಅಭಿನಂದನೆ



ಶಿರಾ ತಾಲ್ಲೂಕು ಮಾಗೋಡು ಸಮೀಪದ ಕೆಂಪನಹಳ್ಳಿಯ ಶ್ರೀಮತಿ ಪಾರ್ವತಮ್ಮ ಮತ್ತು ಮೋಹನ್ ಕುಮಾರ್ ಅವರ ಪುತ್ರಿ ತನು ಕೆ.ಎಂ. ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ 625ಕ್ಕೆ 615 ಅಂಕಗಳನ್ನು ಪಡೆಯುವ ಮೂಲಕ ಎಲ್ಲರ ಪ್ರಶಂಸೆಗೆ ಪಾತ್ರರಾಗಿದ್ದು, ರಾಜ್ಯ ಗೃಹ ಸಚಿವರ ವಿಶೇಷ ಕರ್ತವ್ಯಾಧಿಕಾರಿ ಡಾ. ನಾಗಣ್ಣ ಅವರು ವಿದ್ಯಾರ್ಥಿನಿಯ ಮನೆಗೆ ಭೇಟಿ ನೀಡಿ ಅಭಿನಂದಿಸಿದರು. ಈ ಸಂದರ್ಭದಲ್ಲಿ ಕುಮಾರಿ ಡಾ. ವೇದಿಕಾ ಮತ್ತು ಹಿರಿಯರು ಹಾಗೂ ಹರ್ಷಿತ್ ಕುಮರ್ ಎಸ್ ಅವರು ಭಾಗವಹಿಸಿದ್ದರು

ತನು ಕೆ.ಎಂ. ಕನ್ನಡದಲ್ಲಿ 121, ಇಂಗ್ಲೀಷ್‌ನಲ್ಲಿ 100, ಹಿಂದಿ 100, ಗಣಿತ 95, ವಿಜ್ಞಾನ 99, ಸಮಾಜ ವಿಜ್ಞಾನದಲ್ಲಿ 100 ಅಂಕಗಳಿಸಿದ್ದಾರೆ.



ಭಾರತದ ಗಡಿಯಲ್ಲಿ ದೇಶ ರಕ್ಷಣಾ ಕಾರ್ಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಭಾರತೀಯ ಸೈನಿಕರಿಗೆ ಶಕ್ತಿ, ಸಾಮರ್ಥ್ಯ, ಶ್ರೇಯಸ್ಸು ಕೋರಿ ತುಮಕೂರಿನ ಆರ್.ಟಿ.ಓ. ಕಚೇರಿ ಆವರಣದಲ್ಲಿರುವ ವರಪ್ರದ ಶ್ರೀ ವೀರಾಂಜನೇಯ ಸ್ವಾಮಿ ದೇವಸ್ಥಾನದಲ್ಲಿ ದೇವಸ್ಥಾನ ಸೇವಾ ಸಮಿತಿಯವರು ಶನಿವಾರ ವಿಶೇಷ ಪೂಜೆ ಸಲ್ಲಿಸಿ ಪ್ರಾರ್ಥಿಸಿದರು. ಇದರ ಅಂಗವಾಗಿ ಭಕ್ತರಿಗೆಪ್ರಸಾದ ವಿನಿಯೋಗ ವ್ಯವಸ್ಥೆ ಮಾಡಲಾಗಿತ್ತು.

### ಮೇ 25ರಂದು ಸ್ಲಂ ಜನರ ಹಬ್ಬ | ಸಮಾವೇಶ ಮತ್ತು ಪ್ರತಿಭಾಪುರಸ್ಕಾರ

## ಶ್ರಮಿಕರ ಸಂಸ್ಕೃತಿಯೇ ಸ್ಲಂ ಹಬ್ಬ – ಡಾ.ಎಸ್. ರಮೇಶ್

ತುಮಕೂರು: ಇಂದು ಸ್ಲಂ ಜನಾಂದೋಲನ ಕರ್ನಾಟಕ ಮತ್ತು ತುಮಕೂರು ಜಿಲ್ಲಾ ಕೊಳಗೇರಿ ನಿವಾಸಿಗಳ ಹಿತರಕ್ಷಣಾ ಸಮಿತಿಯಿಂದ ಇದೇ ಮೇ 25 ರಂದು ನಡೆಯಲಿರುವ ಸ್ಲಂ ಜನರ ಹಬ್ಬ, ಸಮಾವೇಶ ಮತ್ತು ಪ್ರತಿಭಾಪುರಸ್ಕಾರದ ಕರಪತ್ರ ಬಿಡುಗಡೆ ಮಾಡಲಾಯಿತು.

ಸೂಫಿಯಾ ಕಾನೂನು ಕಾಲೇಜಿನ ಪ್ರಾಂಶುಪಾಲರಾದ ಡಾ.ಎಸ್ ರಮೇಶ್ ಕರಪತ್ರ ಬಿಡುಗಡೆ ಮಾಡಿ ಪ್ರತಿಯೊಂದು ಸ್ಲಂಗಳು ಪುಟ್ಟ ಭಾರತ ಇಲ್ಲಿರುವ ಬಹುತ್ವಯುತ ಸಂಸ್ಕೃತಿ, ಸಂಪ್ರದಾಯ, ಆಚಾರ –ವಿಚಾರ,



ಜಾತಿ, ಧರ್ಮ, ಭಾಷೆಗಳಿದ್ದರು ಸ್ಲಂಗಳಲ್ಲಿ ಸೋದರತೆಯ ಸೌಹಾರ್ಧತೆಯಲ್ಲಿ ಬದುಕು ಕಟ್ಟಿಕೊಳ್ಳುತ್ತಿರುವುದು ಇಂದಿನ ಮನುಷ್ಯ ಸಮಾಜಕ್ಕೆ ಮಾದರಿಯಾಗಿದೆ. ಕಳೆದ 20 ವಷಗಳಲ್ಲಿ ಕರ್ನಾಟಕದ ನಗರ ಪ್ರದೇಶಗಳಲ್ಲಿ ಕೆಳಜಾತಿಯ ಬಡ ಜನರು ವಾಸಿಸುವ ಕೊಳಚೆ ಪ್ರದೇಶಗಳಲ್ಲಿರುವ ಶ್ರಮ ಸಂಸ್ಕೃತಿ ಹಲವಾರು ಪಲ್ಲಟನೆಗಳನ್ನು ತಂದಿದ್ದು ಶ್ರಮಿಕರ ಸಾಂಸ್ಕೃತಿಕತೆಯನ್ನು ಬೆಸೆಯುತ್ತಿದ್ದು 2007ರಲ್ಲಿ ಪ್ರಾರಂಭಿಸಲಾದ ಸ್ಲಂ ಹಬ್ಬ ಸ್ಲಂ ನಿವಾಸಿಗಳಿಗೆ ನಗರದ ಮೇಲಿನ ಉತ್ತರದಾಯಕತ್ವಕ್ಕಾಗಿಶ್ರಮಿಸುತ್ತಿದೆ ಎಂದರು.

ನಂತರ ಕನಕ ಪತ್ತಿನ ಸಹಕಾರ ಸಂಘದ ಅಧ್ಯಕ್ಷರು ಮಾಜಿ ನಗರ ಪಾಲಿಕೆ ಸದಸ್ಯರಾದ ಲಕ್ಷ್ಮೀ ನರಸಿಂಹರಾಜು ಮಾತನಾಡಿ ರಾಜ್ಯ ಮಟ್ಟದ ಈ ಕಾರ್ಯಕ್ರಮ ತುಮಕೂರಿನಲ್ಲಿ ನಡೆಯುತ್ತಿರುವುದು ಸಂತೋಷದ ಸಂಗತಿ, ಈ ಸ್ಲಂ ಹಬ್ಬದಲ್ಲಿ ತಳಸಮುದಾಯಗಳ ಕಲಾಪ್ರಕಾರಗಳು ಪ್ರದರ್ಶನವಾಗುತ್ತಿದ್ದು ಸ್ಲಂ ವಿಧ್ಯಾರ್ಥಿಗಳಿಗೆ ನಿರಂತರವಾಗಿ ಪ್ರೋತ್ಸಾಹ ನೀಡುವ ಸಲುವಾಗಿ ಪ್ರತಿಭಾಪುರಸ್ಕಾರ ಹಮ್ಮಿಕೊಳ್ಳುತ್ತಿರುವುದು ಸ್ಲಂ ಮಕ್ಕಳಲ್ಲಿ ಸ್ಫೂರ್ತಿ ತಂದಿದೆ ಎಂದರು.

ನಗರೀಕರಣ ಪ್ರಕ್ರಿಯೆ ವೇಗವಾಗುತ್ತಿದ್ದು ಕಳೆದ 2 ವರ್ಷಗಳಿಂದ ಸರ್ಕಾರಿ ಮತ್ತು ಖಾಸಗಿ ಸ್ಲಂಗಳ ಘೋಷಣೆ ತಟಸ್ಥವಾಗಿದೆ, ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ ಕಳಪೆ ಗುಣಮಟ್ಟದ ಮನೆಗಳನ್ನು ಅರ್ಧಂಬರ್ಧ ಕಟ್ಟಿ ಕೈಬಿಡಲಾಗುತ್ತಿದೆ, 2023ರ ವಿಧಾನ ಸಭೆ ಚುನಾವಣಾ ಪ್ರಣಾಳಿಕೆಯಲ್ಲಿ ಈಗಿನ ಸರ್ಕಾರ ನೀಡಿರುವ ಆಶ್ವಾಸನೆಯಂತೆ ನಗರ ಲ್ಯಾಂಡ್ ಬ್ಯಾಂಕ್ ಯೋಜನೆ ಮತ್ತು ನಗರ ಉದ್ಯೋಗ ಖಾತ್ರಿ ಯೋಜನೆಯನ್ನು ಜಾರಿಗೆ ತರಬೇಕು, ನಗರಾಭಿವೃದ್ಧಿ ಯೋಜನೆಗಳಲ್ಲಿ ನಗರದ ಬಡಜನರು ಹಾಗೂ ಕೊಳಗೇರಿ ನಿವಾಸಿಗಳನ್ನು ನಿರ್ಲಕ್ಷಿಸದೇ ಜನರ ಕಲ್ಯಾಣದ ಸಂವಿಧಾನದ ಆಶಯವನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಈಡೇರಿಸಲು ರಾಜ್ಯಾದ್ಯಂತ ಸಮಾವೇಶಗಳನ್ನು ಹಮ್ಮಿಕೊಂಡಿದ್ದು ಮೇ 25 ರಂದು ತುಮಕೂರಿನಲ್ಲಿ ಮೇ–28 ರಂದು ಗದಗ್‌ನಲ್ಲಿ ಮೇ–29 ರಂದು ಕಲ್ಬುರ್ಗಿಯಲ್ಲಿ, ಮತ್ತು ಮೇ–31 ರಂದು ರಾಯಚೂರಿನಲ್ಲಿ ಹಮ್ಮಿಕೊಳ್ಳಲಾಗಿದೆ ಎಂದರು.

ಈ ಸಂದರ್ಭದಲ್ಲಿ ತುಮಕೂರು ಸ್ಲಂ ಸಮಿತಿ ಪದಾಧಿಕಾರಿಗಳಾದ ಅರುಣ್, ಶಂಕ್ರಯ್ಯ, ತಿರುಮಲಯ್ಯ, ಕೃಷ್ಣಮೂರ್ತಿ, ಧನಂಜಯ್ ಮುಂತಾದವರು ಪಾಲ್ಗೊಂಡಿದ್ದರು.

### ತುಮಕೂರು ಸಿಟಿ ಕ್ರೆಡಿಟ್ ಸೌಹಾರ್ದ ಸಂಸ್ಥೆ ಸಭೆಯಲ್ಲಿ ಹಿರೇಮಠ ಶ್ರೀ ಸಲಹೆ

## ‘ಸಹಕಾರ ಸಂಸ್ಥೆಗಳಿಗೆ ಆತ್ಮವಿಶ್ವಾಸ, ಸದಸ್ಯರ ವಿಶ್ವಾಸ ಅಗತ್ಯ’

ತುಮಕೂರು: ಆಡಳಿತ ಮಂಡಳಿಯ ಆರ್ಥಿಕ ಶಿಸ್ತು, ಬದ್ಧತೆ, ಆತ್ಮವಿಶ್ವಾಸದಿಂದ ಸಹಕಾರ ಸಂಸ್ಥೆಯನ್ನು ಸದೃಢವಾಗಿ ಬೆಳೆಸಲು ಸಾಧ್ಯವಿದೆ. ಠೇವಣಿದಾರರು ಸಂಸ್ಥೆಯಲ್ಲಿ ಹೂಡಿರುವ ಹಣವನ್ನು ಲಾಭದಾಯಕವಾಗಿ ಬೆಳೆಸುವ ನಂಬಿಕೆ, ವಿಶ್ವಾಸ ಗಳಿಸಿಕೊಳ್ಳಬೇಕು ಎಂದು ಹಿರೇಮಠದ ಅಧ್ಯಕ್ಷರಾದ ಡಾ.ಶಿವಾನಂದ ಶಿವಾಚಾರ್ಯ ಸ್ವಾಮೀಜಿ ಸಲಹೆ ಮಾಡಿದರು.

ನಗರದಲ್ಲಿ ಶನಿವಾರ ತುಮಕೂರು ಸಿಟಿ ಕ್ರೆಡಿಟ್ ಸೌಹಾರ್ದ ಕೋ–ಆಪರೇಟಿವ್ ಸೊಸೈಟಿಯ 13ನೇ ವಾರ್ಷಿಕ ಸರ್ವಸದಸ್ಯರ ಮಹಾಸಭೆ ಉದ್ಘಾಟಿಸಿ ಮಾತನಾಡಿದ ಸ್ವಾಮೀಜಿ, ವಾರ್ಷಿಕ ಸಭೆಗಳು ಆ ಸಹಕಾರ ಸಂಸ್ಥೆಯ ಹಿಂದಿನ, ಈ ಸಾಲಿನ ಹಾಗೂ ಮುಂದಿನ ವರ್ಷದ ಸಾಧನೆ ನೋಟ, ಆಡಳಿತ ಮಂಡಳಿಯ ಆತ್ಮಾವಲೋಕನಾ ಸಭೆ. ಸದಸ್ಯರ, ಗ್ರಾಹಕರ, ಠೇವಣಿದಾರರ ನಂಬಿಕೆ, ವಿಶ್ವಾಸ ಮೂಡಿಸುವ ಸಾಧನೆ ಆಗಬೇಕು ಎಂದು



ಹೇಳಿದರು.

ದುಡ್ಡಿನ ಜೊತೆಗಿನ ಸಂಬಂಧ, ವ್ಯವಹಾರ ಸೂಕ್ಷ್ಮವಾದದ್ದು, ಹಣಕಾಸು ಸಂಸ್ಥೆಯನ್ನು ಬಹಳ ಎಚ್ಚರಿಕೆಯಿಂದ, ಜವಾಬ್ದಾರಿಯಿಂದ ಹೆಗಲ ಮೇಲೆ ಹೊತ್ತು ನಿರ್ವಹಿಸಬೇಕಾಗುತ್ತದೆ. ಈ ಸಂಸ್ಥೆ ಅಂತಹ ಜವಾಬ್ದಾರಿಯೊಂದಿಗೆ ಪ್ರಗತಿ ಸಾಧಿಸುತ್ತಿದೆ. ಸಂಸ್ಥೆ ಕಟ್ಟುವಲ್ಲಿ ಎಡವಿದರೆ ಎಲ್ಲರಿಗೂ ನಷ್ಟ, ಹಾನಿ ಅನುಭವುಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಯಾವುದೇ ಅಭಿವೃದ್ಧಿಗೆ ಅದೃಷ್ಟವನ್ನೇ ನಂಬಿ ಕೂರಬಾರದು. ಪ್ರಯತ್ನ ಬಿಡಬಾರದು. ಅದೃಷ್ಟಕ್ಕೆ ಕೈ ಕೊಡುವ ಚಾಳಿಯಿದೆ. ಪ್ರಯತ್ನ ಕೈ ಕೊಡುವುದಿಲ್ಲ. ಪ್ರಯತ್ನ, ಶ್ರಮ, ಆತ್ಮವಿಶ್ವಾಸವಿದ್ದರೆ ಯಾವುದೂ ಕಷ್ಟವಲ್ಲ. ಹಿರೇಮಠವು ತಮ್ಮ ಪ್ರಯತ್ನ ಹಾಗೂ ಭಕ್ತರ ಸಹಕಾರದಿಂದಲೇ ಬೆಳೆದಿದೆ. ಹಿರೇಮಠ ಸನ್ಯಾಸದ ಜೊತೆ ಮೌಲ್ಯವನ್ನು ಉಳಿಸಿಕೊಂಡು ಬೆಳೆದಿದೆ, ಮೌಲ್ಯರಹಿತವಾಗಿ ಬೆಳೆದಿಲ್ಲ ಎಂದರು.

ಸಭೆಯ ಅಧ್ಯಕ್ಷತೆವಹಿಸಿದ್ದ ತುಮಕೂರು ಸಿಟಿ ಕ್ರೆಡಿಟ್ ಸೌಹಾರ್ದ ಕೋ–ಆಪರೇಟಿವ್ ಸೊಸೈಟಿಯು ಅಧ್ಯಕ್ಷ ಕೆ.ಎನ್.ಶಶಿಧರ್ ಮಾತನಾಡಿ, ಸೊಸೈಟಿ ಈ ಸಾಲಿನಲ್ಲಿ 90 ಲಕ್ಷ ರೂ. ನಿವ್ವಳ ಲಾಭ ಗಳಿಸಿದೆ. ಸುಮಾರು 50 ಕೋಟಿ ರೂ.ಗಳ ಠೇವಣಿ ಸಂಗ್ರಹಿಸಿದೆ ಎಂದರು.

ವಿವಿಧ ಸಾಲಸೌಲಭ್ಯಗಳ ಜೊತೆಗೆ ಸಹಕಾರಿ ಸದಸ್ಯರಿಗೆ ಮರಣೋತ್ತರ ನಿಧಿ 10 ಸಾವಿರ ರೂ., ಚಿಕಿತ್ಸಾ ವೆಚ್ಚ ಹತ್ತು ಸಾವಿರ ರೂ. ನೀಡಲಾಗುವುದು ಎಂದರು.

ಸಂಸ್ಥೆ ಉಪಾಧ್ಯಕ್ಷ ಎಂ.ಎನ್.ಚಿದಾನಂದ, ನಿರ್ದೇಶಕರಾದ ಕೆ.ಎನ್.ರಾಮಚಂದ್ರಬಾಬು, ಎಂ.ಎಸ್.ಕಲ್ಲೇಶ್, ರವಿಶಂಕರ್, ಎಸ್.ಬಿ.ಶಿವಬಸಪ್ಪ, ಕೆ.ಎಸ್.ಗಿರೀಶ್, ಜೆ.ಟಿ.ಜಗದೀಶ್, ಕೆ.ಎಸ್.ವಿಕಾಸ್, ಪದ್ಮಾ ಪಾಲನೇತ್ರ, ಜಿ.ಮಾನಸ, ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಪಿ.ಶಿಲ್ಪ, ವಿವಿಧ ಶಾಖೆಗಳ ವ್ಯವಸ್ಥಾಪಕರಾದ ಕೆ.ಜೆ.ಹರ್ಷಿತ, ಮನೋಜ್‌ಕುಮಾರ್ ಹಾಗೂ ಸದಸ್ಯರು, ಸಿಬ್ಬಂದಿ ಹಾಜರಿದ್ದರು.

## ಆಟೋ ಚಾಲಕರ ಮಕ್ಕಳಿಂದ ಪ್ರತಿಭಾ ಪುರಸ್ಕಾರ

ತುಮಕೂರು: ಜಿಲ್ಲಾ ಆಟೋ ಚಾಲಕರು ಮತ್ತು ಮಾಲೀಕರ ಸಂಘಟನೆಗಳ ಒಕ್ಕೂಟದಿಂದ ಜಿಲ್ಲೆಯ ಆಟೋ ಚಾಲಕ, ಮಾಲೀಕರ ಪ್ರತಿಭಾವಂತ ಮಕ್ಕಳಿಗೆ ಪುರಸ್ಕಾರ ವಿತರಿಸುವ ಕಾರ್ಯಕ್ರಮ ಹಮ್ಮಿಕೊಂಡಿದೆ. ಈ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯೂಸಿಯಲ್ಲಿ ಶೇಕಡ 75ಕ್ಕೂ ಹೆಚ್ಚು ಅಂಕ ಪಡೆದ ಜಿಲ್ಲೆಯ ಆಟೋ ಚಾಲಕರು, ಮಾಲೀಕರ ಮಕ್ಕಳು ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ವಿವರಗಳಿಗೆ ಅಧ್ಯಕ್ಷ ಪ್ರತಾಪ್ ಮದಕರಿ, ಮೊಬೈಲ್ ನಂ. 8951994595, ಪ್ರಧಾನ ಕಾರ್ಯದರ್ಶಿ ಫೈರೋಜ್ 9980353540 ಇವರನ್ನು ಸಂಪರ್ಕಿಸಲು ಕೋರಲಾಗಿದೆ.

## 'ತಾಯಿಯ ಪಾತ್ರ ಮಹತ್ವದ್ದು': ಎಂ.ವೈ.ಹೊಸಮನಿ



ಮಧುಗಿರಿ: ಮಕ್ಕಳಿಗೆ ಹಾಲುಣಿಸಿ, ಅಕ್ಷರ ಕಲಿಸಿ ಸಂಸ್ಕಾರ ನೀಡುವಲ್ಲಿ ತಾಯಿಯ ಪಾತ್ರ ಮಹತ್ವದ್ದು ಎಂದು ಪ್ರಾಂಶುಪಾಲ ಎಂ.ವೈ.ಹೊಸಮನಿ ಅಭಿಪ್ರಾಯಪಟ್ಟರು.

ಪಟ್ಟಣದ ಟಿ.ವಿ.ವಿ.ಪ್ರಥಮದರ್ಜೇ ಕಾಲೇಜಿನಲ್ಲಿ ಏರ್ಪಡಿಸಿದ್ದ 'ವಿಶ್ವ ತಾಯಂದಿರ ದಿನ' ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿ ,ತೊಟ್ಟಿಲು ತೂಗುವ ಕೈ ದೇಶವನ್ನು ಆಳಬಲ್ಲದು ಎಂಬುದನ್ನು ತೋರಿಸಿದ್ದಾರೆ. ವಿಜ್ಞಾನಿಯಾಗಿ, ಬಾಹ್ಯಾಕಾಶ ಸುತ್ತಿಬಂದಿದ್ದಾರೆ ಎಂದರು.

ಸಾಹಿತಿ ಪ್ರೊ.ಮ.ಲ.ನ.ಮೂರ್ತಿ ಮಾತನಾಡಿ ತಾಯ ಕರುಳು ಕರುಣೆಯ ಕಡಲು,ತ್ಯಾಗದ ಹಣತೆ ಹಚ್ಚಿದ ಒಡಲು .ಆಕೆಯನ್ನು ಮಕ್ಕಳು ಗೌರವಿಸಬೇಕು.ತಾಯಿಗಿಂತ ಬಂಧುವಿಲ್ಲ ಉಪ್ಪಿಗಿಂತ ರುಚಿಯಿಲ್ಲ.ಎಂದು ತಿಳಿಸಿದರು.

ಉಪನ್ಯಾಸಕರಾದ ಮಂಜುನಾಥ್ ಮಾತನಾಡಿ,ತಾಯಿ ಜಗದ ಒಳ್ಳೆಯದೆಲ್ಲದರ ಗಣಿ ,ಆ ತಾಯಿಗೆ ಜಗದೆಲ್ಲರು ಋಣಿ ಎಂದರು.

ಭೂತರಾಜು ಮಾತನಾಡಿ,ಎಷ್ಟು ದೇಗುಲ ಸುತ್ತಿದರೂ ತಾಯಿಗಿಂತ ದೇವರಿಲ್ಲ ಎಂದರು.

ಶನಿವಾರಪ್ಪ ಮಾತನಾಡಿ ತಾಯಿ ಜಗತ್ತಿನ ಸೃಷ್ಟಿಕರ್ತಳು. ಆಕೆಯ ಸ್ಥಾನಮಾನ ತುಂಬಲು ಯಾರಿಂದಲೂ ಸಾಧ್ಯವಿಲ್ಲ ಎಂದರು.

ಕಾರ್ಯಕ್ರಮದಲ್ಲಿ ಶ್ವೇತ ಪ್ರಾರ್ಥಿಸಿ ಪಿ.ಗೌತಮಿ ಶ್ರೀ ಸ್ವಾಗತಿಸಿ,ಮೋನಿಕಾ ನಿರೂಪಿಸಿ ,ಮಹೇಶ ವಂದಿಸಿದರು.

## ಕುಣಿಗಲ್‌ನಲ್ಲಿ ನಡೆಯುತ್ತಿರುವ ಪ.ಜಾತಿ ಸಮೀಕ್ಷೆ ಕಾರ್ಯ ಪರಿಶೀಲಿಸಿದ ಶುಭ ಕಲ್ಯಾಣ್

# ನೈಜ ಮಾಹಿತಿ ಸಂಗ್ರಹಕ್ಕೆ ಜಿಲ್ಲಾಧಿಕಾರಿ ಸೂಚನೆ



ಕುಣಿಗಲ್: ಪಟ್ಟಣದ ಇಂದಿರಾನಗರಕ್ಕೆ ಭೇಟಿ ನೀಡಿದ ಜಿಲ್ಲಾಧಿಕಾರಿ ಶುಭಕಲ್ಯಾಣ್ ಪ.ಜಾತಿ ಜನಗಣತಿ ಸಮೀಕ್ಷೆ ಕಾರ್ಯವನ್ನು ಪರಿಶೀಲಿಸಿ ಗಣತಿದಾರರಿಂದ ಪಡೆದರು.

ರಾಜ್ಯಾದ್ಯಂತ, ಜಿಲ್ಲಾದ್ಯಂತ ಪ.ಜಾತಿಯ ಗಣತಿ ಸಮೀಕ್ಷೆ ನಡೆಯುತ್ತಿದ್ದು, ಈ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳು ಸಮೀಕ್ಷೆ ಪರಿಶೀಲಿಸಿದರು.

ಬಳಿಕ ಪತ್ರಕರ್ತರೊಂದಿಗೆ ಮಾತನಾಡಿದ ಜಿಲ್ಲಾಧಿಕಾರಿಗಳು, ಗಣತಿದಾರರು ಪ್ರತಿ ಮನೆಗೆ ಭೇಟಿ ನೈಜ ಮಾಹಿತಿಯನ್ನು ಸಂಗ್ರಹಿಸಬೇಕೆಂದು ಸೂಚನೆ ನೀಡಲಾಗಿದೆ. ಪರಿಶಿಷ್ಟ ಜಾತಿಗಳ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ, ರಾಜಕೀಯ ಸ್ಥಿತಿ–ಗತಿಗಳ ವಾಸ್ತವಾಂಶ ಅರಿಯಲು ರಾಜ್ಯಾದ್ಯಂತ ಸಮೀಕ್ಷೆ ನಡೆಸಲಾಗುತ್ತಿದೆ.

ಸಮೀಕ್ಷೆಯು 3 ಹಂತದಲ್ಲಿ ನಡೆಯಲಿದ್ದು, ಮೊದಲ ಹಂತದಲ್ಲಿ ಗಣತಿದಾರರು ಮೇ 5 ರಿಂದ 17 ರವರೆಗೆ ಮನೆ–ಮನೆ ಭೇಟಿ ನೀಡಿ ಸಮೀಕ್ಷೆ ಕೈಗೊಳ್ಳಲಿದ್ದಾರೆ. 2ನೇ ಹಂತದಲ್ಲಿ ಮೇ 19 ರಿಂದ 21ರವರೆಗೆ ಆಯಾ ಮತಗಟ್ಟೆಗಳಲ್ಲಿ ಸಮೀಕ್ಷೆ ನಡೆಸಲಾಗುವುದು. ಪ್ರವಾಸದಲ್ಲಿ ಇರುವವರು, ವಿವಿಧ ಕಾರಣಗಳಿಂದ ಮನೆಯಿಂದ ಹೊರಗಿರುವವರು ಈ ಹಂತದಲ್ಲಿ ಸಂಬಂಧಿಸಿದ ಮತಗಟ್ಟೆಗಳಿಗೆ ಭೇಟಿ ನೀಡಿ ತಮ್ಮ ಜಾತಿಯ ವಿವರಗಳನ್ನು ದಾಖಲಿಸಬಹುದು ತಿಳಿಸಿದರು. ಎಂದು 3ನೇ ಹಂತದಲ್ಲಿ ಪರಿಶಿಷ್ಟ ಜಾತಿಯ ಉಪಜಾತಿ

ವಿವರವನ್ನು ಆನ್‌ಲೈನ್ ಮೂಲಕ ಸ್ವಯಂ ಘೋಷಿಸಿಕೊಳ್ಳಲು ಮೇ 19 ರಿಂದ 23ರವರೆಗೆ ಕಾಲಾವಕಾಶ ನೀಡಲಾಗುವುದು. ಸಮೀಕ್ಷಾ ಅವಧಿಯಲ್ಲಿ ಸ್ವಗ್ರಾಮಕ್ಕೆ ಭೇಟಿ ನೀಡಲು ಸಾಧ್ಯವಾಗದೇ ಇರುವವರು 3ನೇ ಹಂತದ ಸಮೀಕ್ಷೆಯಲ್ಲಿ ಪಾಲ್ಗೊಂಡು ಮಾಹಿತಿ ನೀಡುವ ಮೂಲಕ ಸಮೀಕ್ಷಾ ಕಾರ್ಯವನ್ನು ಯಶಸ್ವಿಗೊಳಿಸಬೇಕೆಂದು ಸಾರ್ವಜನಿಕ ರಲ್ಲಿ ಮನವಿ ಮಾಡಿದರು.

ಗಣತಿದಾರರ ತಾಂತ್ರಿಕ ಸಮಸ್ಯೆಯನ್ನು ನಿವಾರಣೆ ಮಾಡುವ ಉದ್ದೇಶದಿಂದ ಜಿಲ್ಲೆ ಹಾಗೂ ರಾಜ್ಯದಲ್ಲಿ ಕಂಟ್ರೋಲ್ ರೂಂ ಸ್ಥಾಪನೆ ಮಾಡಲಾಗಿದ್ದು, ಆ ರೀತಿಯ ಸಮಸ್ಯೆ ಇದ್ದಲ್ಲಿ, ತಕ್ಷಣ ಬಗೆ ಹರಿಸುವಂತಹ ಕೆಲಸ ಮಾಡಲಾಗುವುದೆಂದು ಡೀಸಿ ಹೇಳಿದರು.

ಈ ವೇಳೆ ತಹಶೀಲ್ದಾರ್ ರಶ್ಮಿ.ಯು, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಶಿವಲಿಂಗಯ್ಯ, ಸರ್ಕಾರಿ ನೌಕರರ ಸಂಘದ ಕಾರ್ಯದರ್ಶಿ ಶಿವರಾಮಯ್ಯ ಇದ್ದರು.

## ಬ್ಯಾಂಕುಗಳಲ್ಲಿ ಸಾಲ ಸೌಲಭ್ಯ ಪಡೆಯಲು ಸಿಬಿಲ್ ಸ್ಕೋರ್ ಅತ್ಯಗತ್ಯ: ಆರ್.ತಿಪ್ಪೇಸ್ವಾಮಿ



ಹುಳಿಯಾರು: ಬ್ಯಾಂಕುಗಳಲ್ಲಿ ಯಾವುದೇ ಸಾಲ ಸೌಲಭ್ಯ ಪಡೆಯಬೇಕಾದರೆ ಸಿಬಿಲ್ ಸ್ಕೋರ್ ಚೆನ್ನಾಗಿದ್ದರೆ ಮಾತ್ರ ಬ್ಯಾಂಕುಗಳು ಸಾಲ ಸೌಲಭ್ಯ ನೀಡುತ್ತವೆ, ಹಾಗಾಗಿ ಪಡೆದ ಸಾಲವನ್ನು ಸರಿಯಾದ ರೀತಿಯಲ್ಲಿ ಮರು ಪಾವತಿಸಬೇಕು ಎಂದು ಕರ್ನಾಟಕ ಗ್ರಾಮೀಣ ಬ್ಯಾಂಕ್ ಕಂದಿಕೆರೆ ಶಾಖೆಯ ವ್ಯವಸ್ಥಾಪಕರಾದ ಆರ್.ತಿಪ್ಪೇಸ್ವಾಮಿ ತಿಳಿಸಿದರು.

ತಿಮ್ಮನಹಳ್ಳಿ ಸತ್ಯ ಸಂಜೀವಿನಿ ಒಕ್ಕೂಟ ಹಾಗೂ ಆರ್ಥಿಕ ಸಾಕ್ಷರತಾ ಕೇಂದ್ರ ಚಿಕ್ಕನಾಯಕನಹಳ್ಳಿ ಜಂಟಿಯಾಗಿ ಏರ್ಪಡಿಸಿದ್ದ ಜನ ಸುರಕ್ಷಾ ಶಿಬಿರದಲ್ಲಿ ಅವರು ಮಾತನಾಡಿದರು.

ಆರ್ಥಿಕ ಸಾಕ್ಷರತಾ ಸಲಹೆಗಾರರಾದ ಆರ್.ಎಂ.ಕುಮಾರಸ್ವಾಮಿ ಮಾತನಾಡುತ್ತಾ ತಿಮ್ಮನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸುಮಾರು ನೂರು ಸ್ವಸಾಯ ಸಂಘಗಳಿದ್ದು ಆ ಸಂಘದ ಸದಸ್ಯರ ಜೊತೆಗೆ ಅವರ ಕುಟುಂಬದವರನ್ನು ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿಗಳ ಯೋಜನೆಗಳಾದ ಜನ ಸುರಕ್ಷಾ ಹಾಗೂ ಜೀವನ ಜ್ಯೋತಿ ವಿಮಾ ಯೋಜನೆಯಲ್ಲಿ ಬ್ಯಾಂಕುಗಳ ಮುಖಾಂತರ ನೋಂದಾಯಿಸಿಕೊಳ್ಳಬೇಕೆಂದು ಕರೆ ನೀಡಿದರು.

ಸತ್ಯ ಸಂಜೀವಿನಿ ಒಕ್ಕೂಟದ ಸಂಪನ್ಮೂಲ ವ್ಯಕ್ತಿ ಶಾಮಲಾ ಮಾತನಾಡುತ್ತಾ ಕೇವಲ ವಾರ್ಷಿಕ ರೂ.20 ಹಾಗೂ ರೂ.436 ಹಣ ಪಾವತಿಸಿ ಸುರಕ್ಷಾ ಹಾಗೂ ಜೀವನ ಜ್ಯೋತಿ ವಿಮಾ ಯೋಜನೆ ಯಲ್ಲಿ ನೋಂದಾಯಿಸಿ ಮರಣ ಹೊಂದಿದಲ್ಲಿ ಎರಡು ಲಕ್ಷಗಳ ವಿಮಾ ಮೊತ್ತ ದೊರೆಯುತ್ತದೆ ಎಂದು ತಿಳಿಸಿದರು.

ಸತ್ಯ ಸಂಜೀವಿನಿ ಒಕ್ಕೂಟದ ಎಂಬಿಕೆ ಉಮಾದೇವಿ, ಅಧ್ಯಕ್ಷರಾದ ಕಮಲಮ್ಮ, ತಿಮ್ಮನಹಳ್ಳಿ ಗ್ರಾಮ ಪಂಚಾಯಿತಿ ಸತ್ಯ ಸಂಜೀವಿನಿ ಒಕ್ಕೂಟದ ಸದಸ್ಯರು, ಬಡಕೆ ಗುಡ್ಲು, ಮೈಲುಕಬ್ಬೆ, ತಿಮ್ಮನಹಳ್ಳಿ ಸ್ವಸಹಾಯ ಸಂಘದ ಪ್ರತಿನಿಧಿಗಳು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

## ಪಶು ಸಂಗೋಪನೆಯಿಂದ ರೈತರು ಸದೃಢ: ಟಿ.ಬಿ.ಜಯಚಂದ್ರ



ಶಿರಾ: ಜಾನುವಾರುಗಳ ಸಂರಕ್ಷಣೆ ಪ್ರತಿಯೊಬ್ಬ ರೈತರ ಕರ್ತವ್ಯವಾಗಿದ್ದು ಇಡೀ ಕುಟುಂಬದ ಜೀವನಕ್ಕೆ ಆಧಾರವಾಗಿ ನಿಲ್ಲಬಲ್ಲ ಉದ್ಯಮವೆಂದರೆ ಅದು ಪಶು ಸಂಗೋಪನೆಯಾಗಿದ್ದು, ರೈತರು ಪಶು ಸಂಗೋಪನೆಯಿಂದ ಆರ್ಥಿಕವಾಗಿ ಸದೃಢರಾಗಲು ಸಾಧ್ಯ ಎಂದು ದೆಹಲಿ ವಿಶೇಷ ಪ್ರತಿನಿಧಿ ಟಿ.ಬಿ. ಜಯಚಂದ್ರ ಹೇಳಿದರು.

ತಾಲೂಕಿನ ಹುಲಿಕುಂಟೆ ಹೋಬಳಿಯ ದೊಡ್ಡಬಾಣಗೆರೆ ಗ್ರಾಮದಲ್ಲಿ ಶುಕ್ರವಾರ ನಡೆದ ನೂತನ ಪಶು ಚಿಕಿತ್ಸಾ ಕೇಂದ್ರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರಾಜ್ಯ ಸರ್ಕಾರವು ಇತ್ತೀಚೆಗೆ ಪ್ರತಿ ಜಿಲ್ಲೆಗಳಲ್ಲೂ ಪಾಲಿ ಕ್ಲಿನಿಕ್‌ಗಳನ್ನು ಆರಂಭಿಸಿದ್ದು ಇದರಲ್ಲಿರುವ ಲ್ಯಾಬೋರೋಟರಿಗಳ ಮೂಲಕ ಪ್ರಾಣಿಗಳ ಆರೋಗ್ಯ ತಪಾಸಣೆ, ರಕ್ತ ತಪಾಸಣೆ ಮೂಲಕ ಪಶು ವೈದ್ಯರು ಸುಲಭವಾಗಿ ಸಾಕು ಪ್ರಾಣಿಗಳ ರೋಗಗಳನ್ನು ಗುರುತಿಸಿ ಚಿಕಿತ್ಸೆ ನೀಡಲು ಅನುಕೂಲ ವಾಗಲಿದೆ ಎಂದು ಹೇಳಿದರು.

ಗ್ರಾಮೀಣ ಭಾಗದ ರೈತರು ಪಶು ಸಂಗೋಪನಾ ವೃತ್ತಿಯಲ್ಲಿ ಹೆಚ್ಚು ತೊಡಗಿಸಿಕೊಳ್ಳಬೇಕು. ಪಶು ಸಂಗೋಪನೆಯು ಒಂದು ರಿತಿಯಲ್ಲಿ ಕಾಮದೇನು ಇದ್ದಂತೆ. ರೈತರ ಕುಟುಂಬಗಳನ್ನು ಸದೃಢಗೊಳಿಸಲು ಇದು ಒಂದು ಮುಖ್ಯ ವೃತ್ತಿಯಾಗಿ ಜೀವನಕ್ಕೊಂದು ಆಸರೆಯಾಗುತ್ತದೆ ಎಂದರು.

ಜಾನುವಾರುಗಳಲ್ಲಿ ಕಂಡು ಬರುವ ರೋಗಗಳ ಬಗ್ಗೆ ವೈದ್ಯರು ಹೆಚ್ಚಿನ ಮಾಹಿತಿ ನೀಡುವಂತಾಗಬೇಕು. ಕಾಲು ಬಾಯಿ ರೋಗದ ಬಗ್ಗೆ ರೈತರಿಗೆ ಆಗಾಗ್ಗೆ ಮಾಹಿತಿ ನೀಡಬೇಕು. ಕಾಲುಬಾಯಿ ರೋಗದ ನಿರ್ಮೂಲನೆಗೆ ಸರ್ಕಾರ ಹಲವು ಮಹತ್ವದ ಕ್ರಮಗಳನ್ನು ಕೈಗೊಂಡಿದೆ ಎಂದು ಟಿ.ಬಿ. ಜಯಚಂದ್ರ ತಿಳಿಸಿದರು.

ಗ್ರಾ.ಪಂ. ಅಧ್ಯಕ್ಷೆ ಮಲ್ಲಮ್ಮ ಕಾಂತರಾಜು, ಜಿಪಂ ಮಾಜಿ ಸದಸ್ಯ ಗುಜ್ಜಾರಪ್ಪ, ರಾಮಕೃಷ್ಣಪ್ಪ, ವಿಎಸ್‌ಎಸ್‌ಎನ್ ಅಧ್ಯಕ್ಷ ರಂಗನಾಥ್, ಪ್ರಾಚಾರ್ಯ ಗುಂಡಪ್ಪ, ಅಜೇಗೌಡ, ಗ್ರಾ.ಪಂ. ಅಧ್ಯಕ್ಷೆ ರೂಪ ನರಸಪ್ಪ, ಗ್ರಾ.ಪಂ. ಸದಸ್ಯ ಗಂಗಾಧರ್, ರಾಜಣ್ಣ, ನಿವೃತ್ತ ಪೊಲೀಸ್ ಪುತ್ರಪ್ಪ ಸೇರಿದಂತೆ ಪಶುಪಾಲನಾ ಇಲಾಖೆಯ ಅಧಿಕಾರಿಗಳು ಇದ್ದರು.

## ಇನ್ನೆರೆಡು ದಿನದಲ್ಲಿ ರಾಜ್ಯಾದ್ಯಂತ ಮಳೆ ಸಂಭವ

ಬೆಂಗಳೂರು : ಕಳೆದ ಒಂದು ವಾರದಿಂದ ಬ್ರೇಕ್ ನೀಡಿದ್ದ ಮಳೆರಾಯ, ಇದೀಗ ಮತ್ತೆ ಆರ್ಭಟಿಸಲಿದ್ದಾನೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಬೆಂಗಳೂರು ಸೇರಿ ರಾಜ್ಯದ 8ಕ್ಕೂ ಹೆಚ್ಚು ಜಿಲ್ಲೆಗಳಲ್ಲಿ ಮುಂದಿನ 2 ದಿನಗಳ ಕಾಲ ಭಾರಿ ಮಳೆಯಾಗಲಿರುವ ಕುರಿತು ಅಂದಾಜಿಸ ಲಾಗಿದೆ. ಬೆಂಗಳೂರು, ಬೆಂಗಳೂರು ಗ್ರಾಂ, ಮೈಸೂರು, ಮಂಡ್ಯ, ಚಾಮರಾಜನಗರ, ರಾಮನಗರ, ಹಾಸನ, ಶಿವಮೊಗ್ಗ, ಚಿಕ್ಕಬಳ್ಳಾಪುರ ದಲ್ಲಿ ಉತ್ತಮ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಹೇಳಿದೆ. ಕಳೆದ 3–4 ದಿನಗಳಿಂದ ಒಣಹವೆ ಹಾಗೂ ಬಿಸಿಲು ಹೆಚ್ಚಿದ್ದು, ತಾಪಮಾನ ಏರಿಕೆಯಿಂದ ಜನರು ಕಂಗಾಲಾಗಿದ್ದು, ಇದೀಗ ಮಳೆ ಬೀಳುವ ವಿಚಾರ ಕೊಂಚ ಸಮಾಧಾನ ತಂದಿದೆ.ಮೇ 12 ತನಕ ಭಾರಿ ಮಳೆಯಾಗಲಿದೆ ಎನ್ನಲಾಗಿದೆ.

**ಕಾಡಿದ್ದರೆ ನಾಡು**

## ರಾಸುಗಳಿಗೆ ಕಾಲುಬಾಯಿ ಜ್ವರ ಲಸಿಕೆ



ಹುಳಿಯಾರು: ಚಿಕ್ಕನಾಯಕನಹಳ್ಳಿ ತಾಲೂಕು ಪಶು ಪಾಲನೆ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ ವತಿಯಿಂದ ಮಲ್ಲಿಗೆರೆ ಗ್ರಾಮದಲ್ಲಿ ರಾಸುಗಳಿಗೆ ರಾಷ್ಟ್ರೀಯ ಕಾಲು ಬಾಯಿ ಜ್ವರ ಮತ್ತು ಚರ್ಮ ಗಂಟು ರೋಗದ ಲಸಿಕೆಯನ್ನು ಹಾಕುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಮತಿಘಟ್ಟದ ಪಶುವೈದ್ಯಾಧಿಕಾರಿ ಡಾ.ರಕ್ಷಿತ್ ನೇತೃತ್ವದಲ್ಲಿ ಲಸಿಕೆಯನ್ನು ಹಾಕಲಾಯಿತು. ಪಶು ಪರೀಕ್ಷಕ ಪಾಲಾಕ್ಷಮೂರ್ತಿ, ದಯಾನಂದ್, ಸಿದ್ದರಾಮಣ್ಣ, ಪಶು ಸಖಿಯರಾದ ಕವಿತಾ ಮತ್ತು ಜ್ಯೋತಿ ಸಹಕಾರ ನೀಡಿದರು.

ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ.ರೆ.ಮ.ನಾಗಭೂಷಣ ರವರು ಕರುಗಳ ಪಾಲನೆ ಪೋಷಣೆ ಮತ್ತು ಕುರಿ ಮೇಕೆ ಸಾಕಾಣಿಕೆ ಕುರಿತು ಮಾಹಿತಿ ನೀಡಿದರು. ಕರುಣಾ, ಕರುಗಳ ಸರ್ವತೋಮುಖ ಬೆಳವಣಿಗೆಗೆ ಪೂರಕವಾದ ಕಾರ್ಯಕ್ರಮ ನಡೆಸಲಾಯಿತು. 30 ಕರುಗಳಿಗೆ ಚಿಕಿತ್ಸೆ ನೀಡಿ, ಟಾನಿಕ್‌ಗಳನ್ನ ವಿತರಿಸಲಾಯಿತು. 1500 ಕುರಿ ಮೇಕೆ ಗಳಿಗೆ ಜಂತು ನಾಶಕ ಔಷಧ ವಿತರಿಸಲಾಯಿತು.

ರೈತರುಗಳಾದ ರಾಗಿಣಿ, ಚಂದ್ರಕಲಾ, ಈಶಣ್ಣ, ಮಹದೇವಪ್ಪ, ನಿರಂಜನ ಮೂರ್ತಿ, ರವಿ, ಕಾಂತರಾಜ್, ಡೈರಿ ಸೆಕ್ರೆಟರಿ ಪುಷ್ಪ ಮುಂತಾದವರು ಭಾಗವಹಿಸಿದ್ದರು.


## ನರೇಗಾ ಕಾಮಗಾರಿ ಪರಿಶೀಲಿಸಿದ ಜಿಲ್ಲಾ ಪಂಚಾಯತ್ ಸಿಇಓ ಜಿ.ಪ್ರಭು



ತುಮಕೂರು: ತುಮಕೂರು ತಾಲ್ಲೂಕಿನ ಸಿಟಿ ಕೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಿರೇ ಗುಂಡಗಲ್ಲು ಗ್ರಾಮಕ್ಕೆ ತುಮಕೂರು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿ.ಪ್ರಭು ಅವರು ಭೇಟಿ ನೀಡಿ ಶಿಲಾ ಶಾಸನಗಳ ಸಂರಕ್ಷಣಾ ಕಾಮಗಾರಿ ಹಾಗೂ ನರೇಗಾ ಯೋಜನೆಯಡಿ ನಿರ್ಮಾಣವಾದ ಜಲ್ಲಿ ರಸ್ತೆ ಕಾಮಗಾರಿ, ಶಾಲಾ ಕಾಂಪೌಂಡ್ ಕಾಮಗಾರಿ, ಶಾಲಾ ಶೌಚಾಲಯ ಕಾಮಗಾರಿಗಳನ್ನು ಪ್ರಗತಿ ಪರಿಶೀಲಿಸಿದರು.

ಈ ವೇಳೆ ತುಮಕೂರು ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಕೆ.ಹರ್ಷಕುಮಾರ್, ಸಹಾಯಕ ನಿರ್ದೇಶಕರಾದ (ಗ್ರಾಮೀಣ ಉದ್ಯೋಗ) ಎಸ್.ಎಸ್.ಮಂಜುನಾಥ್ ಸಹಾಯಕ ನಿರ್ದೇಶಕರು, ತಾಂತ್ರಿಕ ಸಂಯೋಜಕರು, ಗ್ರಾಮ ಪಂಚಾಯತಿ ಸಿಬ್ಬಂದಿ ಹಾಜರಿದ್ದರು.

## ಉನ್ನತ ಗುಣಮಟ್ಟದ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಬೇಕು: ವರುಣ್ ಅಸ್ರಣ್ಣ



ತುಮಕೂರು: ಪ್ರತಿಯೊಬ್ಬ ವಿದ್ಯಾರ್ಥಿಗಳಿಗೂ ಉತ್ತಮವಾದ ಗುಣಮಟ್ಟದ ಶಿಕ್ಷಣವನ್ನು ನೀಡುವುದು ನಮ್ಮ ಮುಖ್ಯ ಗುರಿಯಾಗಿದೆ. ಕಸ್ತೂರ್ಬಾ ಮಲ್ಟಿ ಸ್ಪೆ?ಾಲಿಟಿ ಆಸ್ಪತ್ರೆಯೊಂದಿಗೆ ಮಾಡಿಕೊಂಡಿರುವ ಈ ಒಡಂಬಡಿಕೆಯು ನಮ್ಮ ಬಿ.ಎಸ್ಸಿ ಓಟಿ ಮತ್ತು ಎಟಿ ವಿದ್ಯಾರ್ಥಿಗಳಿಗೆ ಅತ್ಯುತ್ತಮ ಪ್ರಾಯೋಗಿಕ ಅನುಭವವನ್ನು ಒದಗಿಸಲಿದೆ. ಪ್ರತಿ ವ?ರ್ವೂ ನಮ್ಮ ಕಾಲೇಜು ಅತ್ಯುತ್ತಮ ಫಲಿತಾಂಶಗಳನ್ನು ದಾಖಲಿಸುತ್ತಿರುವುದು ಹೆಮ್ಮೆಯ ವಿ?ಯವಾಗಿದೆ ಎಂದು ವರದರಾಜ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ವರುಣ್ ಅಸ್ರಣ್ಣರವರು ತಿಳಿಸಿದರು.

ನಗರದ ಶೆಟ್ಟಿಹಳ್ಳಿ ಹೊರವಲಯದ ಜಯನಗರ ದಕ್ಷಿಣದಲ್ಲಿರುವ ವರದರಾಜ ಚಾರಿಟಬಲ್ ಟ್ರಸ್ಟ್‌ನ ವತಿಯಿಂದ ವರದರಾಜ ಕಾಲೇಜಿನಲ್ಲಿ ಮೇ.7 ರಂದು ಬುಧವಾರ ಬೆಳಿಗ್ಗೆ 11 ಗಂಟೆಗೆ ಕಾಲೇಜಿನ ಆವರಣದಲ್ಲಿ ಪ್ಯಾರಾಮೆಡಿಕಲ್ ಮತ್ತು ಅಲೈಡ್ ಹೆಲ್ತ್ ಸೈನ್ಸ್ ಕಾಲೇಜಿನಲ್ಲಿ ಬಿ.ಎಸ್ಸಿ ಆಪರೇ?ನ್ ಥಿಯೇಟರ್ (ಒಟಿ) ಮತ್ತು ಅರಿವಳಿಕೆ ತಂತ್ರಜ್ಞಾನ (ಎಟಿ) ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ತರಬೇತಿಯ ಮಹತ್ವ ಕುರಿತು ಕಸ್ತೂರ್ಬಾ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯೊಂದಿಗೆ ಮಾಡಿಕೊಂಡಿರುವ ಒಡಂಬಡಿಕೆಯ ಈ ಕಾರ್ಯಕ್ರಮ ಆಯೋಜಿಸಲಾಗಿತ್ತು. ಕಾಲೇಜಿನ ಉತ್ತಮ ಫಲಿತಾಂಶಗಳು ಮತ್ತು ಮುಂಬರುವ ಶೈಕ್ಷಣಿಕ ಯೋಜನೆಗಳ ಬಗ್ಗೆಯೂ ಈ ಸಂದರ್ಭದಲ್ಲಿ ಚರ್ಚಿಸಲಾಯಿತು. ವಿದ್ಯಾರ್ಥಿಗಳ ಪ್ರಾಯೋಗಿಕ ಜ್ಞಾನವನ್ನು ಹೆಚ್ಚಿಸಲು ಹಲವು ಪ್ರತಿಷ್ಠಿತ ಪ್ರಯೋಗಾಲಯಗಳೊಂದಿಗೂ ಒಡಂಬಡಿಕೆ ಮಾಡಿಕೊಳ್ಳಲಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿದ್ದ ವರದರಾಜ ಶಿಕ್ಷಣ ಸಂಸ್ಥೆಯ ನಿರ್ದೇಶಕರಾದ ಡಾ. ಮುಬಾರಕ್‌ರವರು ಮಾತನಾಡಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲರಾದ ಪ್ರೊ. ಉಮೇರಾ ಪರ್ವೀನ್‌ರವರು ಮಾತನಾಡುತ್ತಾ ಅವರು ವಿದ್ಯಾರ್ಥಿಗಳಿಗೆ ಶುಭ ಹಾರೈಸಿದರು ಮತ್ತು ಕಾಲೇಜಿನ ಮುಂದಿನ ಯೋಜನೆಗಳ ಬಗ್ಗೆ ಮಾಹಿತಿ ನೀಡಿದರು. ವಿದ್ಯಾರ್ಥಿಗಳು ಉತ್ಸಾಹದಿಂದ ಕಾರ್ಯಕ್ರಮದಲ್ಲಿ ಪಾಲ್ಗೊಂಡರು ಮತ್ತು ತಮ್ಮ ಅನುಭವಗಳನ್ನು ಹಂಚಿಕೊಂಡರು. ವರದರಾಜ ಪ್ಯಾರಾಮೆಡಿಕಲ್ ಮತ್ತು ಅಲೈಡ್ ಹೆಲ್ತ್ ಸೈನ್ಸಸ್ ಕಾಲೇಜಿನಲ್ಲಿ ನಡೆದ ಈ ಕಾರ್ಯಕ್ರಮವು ವಿದ್ಯಾರ್ಥಿಗಳ ಭವಿ?ದ ದೃಷ್ಟಿಯಿಂದ ಮಹತ್ವದ್ದಾಗಿತ್ತು. ಉನ್ನತ ಮಟ್ಟದ ಶಿಕ್ಷಣ ಮತ್ತು ಪ್ರಾಯೋಗಿಕ ತರಬೇತಿಯನ್ನು ನೀಡುವ ಕಾಲೇಜಿನ ಬದ್ಧತೆಯನ್ನು ಇದು ಎತ್ತಿ ತೋರಿಸಿತು. ಕಾರ್ಯಕ್ರಮದಲ್ಲಿ ವರದರಾಜ ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿ ವರ್ಗದವರು, ಬೋಧಕ–ಬೋಧಕೇತರ ಸಿಬ್ಬಂದಿ ವರ್ಗದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# 'ಈ ಬೇಸಿಗೆಗಾದರೂ ಪ್ರಯಾಣಿಕರಿಗೆ ಕುಡಿಯುವ ನೀರು ಕೊಡಿ'



ಹುಳಿಯಾರು: ಕಳೆದ ಮೂರ್‍ನಲ್ಕು ವರ್ಷಗಳಿಂದಲೂ ಹುಳಿಯಾರು ಬಸ್ ನಿಲ್ದಾಣದಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಮಾಡುವಂತೆ ಕೇಳಿಕೊಂಡರೂ ಸ್ಪಂಧಿಸಿಲ್ಲ. ಈ ವರ್ಷ ಬಿಸಿಲಿನ ಝಳ ಹೆಚ್ಚಾಗಿದ್ದು ಈ ಬೇಸಿಗೆಯಲ್ಲಾದರೂ ದಾಹ ತಣಿಸಲು ನೀರು ಕೊಟ್ಟು ಪುಣ್ಯ ಕಟ್ಟಿಕೊಳ್ಳಿ ಎಂದು ಪ್ರಯಾಣಿಕರು ಹುಳಿಯಾರು ಪಟ್ಟಣ ಪಂಚಾಯ್ತಿ ಅಧಿಕಾರಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಮನವಿ ಮಾಡಿದ್ದಾರೆ.

ಹುಳಿಯಾರು ಮೈಸೂರು, ಚಿತ್ರದುರ್ಗ, ಹಾಸನ, ಬೆಂಗಳೂರು, ಹೊಸದುರ್ಗ, ಬಳ್ಳಾರಿ ಹೀಗೆ ರಾಜ್ಯದ ಪ್ರಮುಖ ಸ್ಥಳಗಳಿಗೆ ಸಾರಿಗೆ ಸಂಪರ್ಕ ಕಲ್ಪಿಸುತ್ತದೆ. ಹಾಗಾಗಿ ಹುಳಿಯಾರು ಬಸ್ ನಿಲ್ದಾಣಕ್ಕೆ ಸಸ್ರಾರು ಜನರು ನಿತ್ಯ ಬಂದೋಗುತ್ತಾರೆ. ಅಲ್ಲದೆ ಶಾಲಾಕಾಲೇಜಿಗೆ ಮಕ್ಕಳು, ಆಸ್ಪತ್ರೆಗಳಿಗೆ ರೋಗಿಗಳು, ಬ್ಯಾಂಕ್‌ಗಳಿಗೆ ವೃದ್ಧರು, ಅಂಗವಿಕಲರು, ವ್ಯಾಪಾರ ವಹಿವಾಟಿಗೆ ಸಹ ಇಲ್ಲಿಗೆ ಜನರು ಬರುತ್ತಾರೆ. ಆದರೆ ಬಸ್ ನಿಲ್ದಾಣದಲ್ಲಿ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸಿದ್ದು, ನಾನಾ ಕಡೆಯಿಂದ ಬಸ್ ಹಿಡಿಯಲು ಆಗಮಿಸಿದ ಪ್ರಯಾಣಿಕರಿಗೆ ನೀರಿನ ಬವಣೆಯ ಬಿಸಿ ತಟ್ಟಿದೆ.

ಈ ಬಸ್ ನಿಲ್ದಣದಲ್ಲಿ ಮುದ್ದಹನುಮೇಗೌಡರು ಸಂಸದರಾಗಿದ್ದ ಸಂದರ್ಭದಲ್ಲಿ ಶುದ್ದ ನೀರಿನ ಘಟಕ ನಿರ್ಮಿಸಿದ್ದರು. ಆದರೆ ಕಳೆದ ಮೂರ್‍ನಲ್ಕು ವರ್ಷಗಳ ಹಿಂದೆ ಈ ಘಟಕ ಕೆಟ್ಟಿದ್ದು ದುರಸ್ತಿಗೆ ಮಾತ್ರ ಪಂಚಾಯ್ತಿ ಮುಂದಾಗಿಲ್ಲ. ಪರಿಣಾಮ ಬಸ್ ನಿಲ್ದಾಣದಲ್ಲಿ ನೀರಿನ ಸಮಸ್ಯೆ ಸೃಷ್ಟಿಯಾಗಿದೆ. ಬೇಸಿಗೆ ಕಾಲದಲಂತೂ ಪರಿಸ್ಥಿತಿ ಮತಷ್ಟು ಬಿಗಡಾಯಿಸುತ್ತದೆ. ಹಣವುಳ್ಳವರು ದುಡ್ಡು ಕೊಟ್ಟು ಮಿನರಲ್ ವಾಟರ್ ಖರೀಧಿಸಿ ಕುಡಿಯುತ್ತಿದ್ದಾರೆ. ಉಳಿದವರು ಬಾಯಾರಿಕೆಯಲ್ಲೇ ತಮ್ಮೂರು ಸೇರುವ ಅನಿವಾರ್ಯತೆ ಇದೆ.

ರಾಜ್ಯದ ಹಲವು ನಗರಗಳಿಗೆ ಹುಳಿಯಾರು ಮಾರ್ಗವಾಗಿ ಬಸ್‌ಗಳು ಓಡಾಡುವುದರಿಂದ ಅಹೋರಾತ್ರಿ ಬಸ್‌ಗಳು ಓಡಾಡುತ್ತವೆ. ರಾತ್ರಿ ಹೋಟೆಲ್‌ಗಳು ಮುಚ್ಚಿರುತ್ತವೆ. ಅಂಥಹ ಸಂದರ್ಭದಲ್ಲಿ ಪ್ರಯಾಣಿಕರ ಗೋಳು ಹೇಳತೀರದು. ರಾತ್ರಿ ತಂಗುವ ಬಸ್‌ಗಳ ಚಾಲಕ–ನಿರ್ವಾಹಕರಿಗೆ ಇದರ ಶಾಕ್ ಮುಟ್ಟುತ್ತದೆ. ಅಲ್ಲಿನ ಫುಟ್ ಫಾತ್ ವ್ಯಾಪಾರಿಗಳಿಗೂ ನೀರಿಗಾಗಿ ಪರಿತಪಿಸುವಂತಹ ಪರಿಸ್ಥಿತಿ ನಿರ್ಮಾಣವಾಗಿರುತ್ತದೆ.

ಕಳೆದ ವರ್ಷ ಬಸ್ ನಿಲ್ದಾಣಲ್ಲಿನ ಪ್ರಯಣಿಕರ ನೀರಿನ ಹಾಹಾಕಾರ ನೋಡಲಾಗದೆ ಇಲ್ಲಿನ ನಿರಾಶ್ರೀತರ ಕ್ಷೇಮಾಭಿವೃದ್ಧಿ ಸಂಘದವರು ಬೇಸಿಗೆ ಕಾಲದಲ್ಲಿ ಅರವಟಿಗೆ ಸ್ಥಾಪಿಸಿ ನಿತ್ಯ ಸಂಘದ ಮಹಿಳೆಯರೇ ನೀರು ತಂದುಹಾಕಿ ಶುದ್ಧ ನೀರು ಕೊಡುತ್ತಿದ್ದರು. ಆದರೆ ಈ ವರ್ಷ ಪಂಚಾಯ್ತಿಯವರೇ ಕ್ಯಾನ್‌ನಲ್ಲಿ ನೀರು ಇಡುತ್ತೇನೆನ್ನುತ್ತಾರೆ. ಆದರೆ ಆಗೊಮ್ಮೆ, ಈಗೊಮ್ಮೆ ಕಾಟಾಚಾರಕ್ಕೆ ನೀರಿನ ಕ್ಯಾನ್ ಇಡುತ್ತಿದ್ದಾರೆ. ರಜೆಯಲ್ಲಿ, ಮುಂಜಾನೆ, ರಾತ್ರಿ ನೀರಿನ ವ್ಯವಸ್ಥೆ ಇರುವುದಿಲ್ಲ.

ಪಂಚಾಯ್ತಿಗೆ ಖಾಸಗಿ ಬಸ್ ಸುಂಕ, ಫುಟ್‌ಫಾತ್ ಸುಂಕ, ವಾಣಿಜ್ಯ ಮಳಿಗೆಗಳ ಬಾಡಿಗೆ ಹೀಗೆ ಮಾಸಿಕ ಲಕ್ಷಾಂತರ ರೂ ಸಂಗ್ರಹವಾಗುತ್ತಿದ್ದರೂ ಬಸ್ ನಿಲ್ದಾಣದಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಇಲ್ಲ ಅಂದರೆ ನಿಜಕ್ಕೂ ಅಚ್ಚರಿಯಾಗುತ್ತದೆ. ಹಣವಂತರು ಮಿನರಲ್ ವಾಟರ್‌ಗಳನ್ನು ತೆಗೆದುಕೊಳ್ಳುತ್ತಾರೆ. ಬಡ ಪ್ರಯಾಣಿಕರು ಏನು ಮಾಡಬೇಕು. ಪ್ರಯಾಣಿಕರ ಅನುಕೂಲಕ್ಕಾಗಿ ಪಂಚಾಯ್ತಿ ತಕ್ಷಣ ನೀರಿನ ವ್ಯವಸ್ಥೆ ಮಾಡಬೇಕಿದೆ.

### ಶೀಘ್ರ ನೀರಿನ ವ್ಯವಸ್ಥೆ ಮಾಡುತ್ತೇವೆ

ಹುಳಿಯಾರು ಬಸ್ ನಿಲ್ದಾಣದಲ್ಲಿ ಶುದ್ಧ ನೀರಿನ ಘಟಕ ನಿರ್ಮಾಣಕ್ಕೆ 5 ಲಕ್ಷ ರೂ. ಮೀಸಲಿಡಲಾಗಿದೆ. ಅಲ್ಲದೆ ಸಾಮಾನ್ಯ ಸಭೆಯ ಅನುಮೋದನೆ ಸಹ ಸಿಕ್ಕಿದೆ. ಶೀಘ್ರದಲ್ಲೇ ಟೆಂಡರ್ ಕರೆದು 1 ರೂ.ಕಾಯಿನ್ ಹಾಕಿ 1 ಲೀ. ನೀರು ಹಿಡಿದುಕೊಳ್ಳುವ ಆರ್‌ಓ ಪ್ಲಾಂಟ್ ನಿರ್ಮಿಸುತ್ತೇವೆ. ಅಲ್ಲಿಯವರೆವಿಗೂ ಪಂಚಾಯ್ತಿಯಿಂದಲೇ ನಿತ್ಯ ನೀರಿನ ಕ್ಯಾನ್ ಇಡುವ ವ್ಯವಸ್ಥೆ ಮಾಡುತ್ತೇವೆ.

- **ನಾಗಭೂಷಣ್**, ಮುಖ್ಯಾಧಿಕಾರಿ, ಪಪಂ,

**Printed by:** H.S.PARAMESH, SRI LAKSHMINARASIMHA OFFSET PRINTERS, 7TH CROSS, SRIRAMA NAGARA, TUMAKURU, TUMAKURU DIST., KARNATAKA PIN-572101
**Published by** RADHIKA A.R., D/O RAMAKRISHNAIAH, BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132 **owned by** RADHIKA A.R., D/O RAMAKRISHNAIAH, BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132 **Printed at** SRI LAKSHMINARASIMHA OFFSET PRINTERS, 7TH CROSS, SRIRAMA NAGARA, TUMAKURU, TUMAKURU DIST., KARNATAKA PIN-572101 **and published at** TUMAKURU. BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132
**Editor:** RADHIKA A.R. "**KARNATAKA SUCCESS NO 1**" KANNADA Daily News Paper